**Akashvani : Bangalore**
**Regional Bulletin In Kannada**
**28.05.2024 / 18.40 hrs**

<u>ಮುಖ್ಯಾಂಶಗಳು</u>

**೧. ಮಹರ್ಷಿ ವಾಲ್ಮೀಕಿ ನಿಗಮದ ಅಧೀಕ್ಷಕ ಆತ್ಮಹತ್ಯೆ ಪ್ರಕರಣ ; ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ; ಸಚಿವ ಬಿ. ನಾಗೇಂದ್ರ**

**೨. ಶಾಲಾ ಶಿಕ್ಷಕರ ಸಮಸ್ಯೆಗಳನ್ನು ಬಗೆಹರಿಸಲು ಸರ್ಕಾರ ಬದ್ಧ ; ಸಚಿವ ಮಧುಬಂಗಾರಪ್ಪ**

**೩. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ; ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ ಆರೋಪ**

**೪. ಮುಂಗಾರು ಆಗಮನದ ನಿರೀಕ್ಷೆಯಲ್ಲಿ ರಾಜ್ಯದ ಅನ್ನದಾತ ; ಬಹುತೇಕ ಜಿಲ್ಲೆಗಳಲ್ಲಿ ಬಿತ್ತನೆ ಆರಂಭ.**

**<><*<><>*><>**

ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರನ್.ಪಿ ಆತ್ಮಹತ್ಯೆ ಪ್ರಕರಣದಲ್ಲಿ ನನ್ನ ಪಾತ್ರ ಇಲ್ಲ ಎಂದು ಪರಿಶಿಷ್ಟ ಪಂಗಡಗಳ ಕಲ್ಯಾಣ ಮತ್ತು ಬಳ್ಳಾರಿ ಜಿಲ್ಲಾ ಉಸ್ತುವಾರಿ ಸಚಿವ ಬಿ. ನಾಗೇಂದ್ರ ಸ್ಪಷ್ಟಪಡಿಸಿದ್ದಾರೆ. ಇಂದು ವಿಧಾನಸೌಧದಲ್ಲಿ ತುರ್ತು ಸುದ್ದಿಗೋಷ್ಠಿ ನಡೆಸಿದ ಅವರು, ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಹೇಳಿದ್ದಾರೆ. ನಿಗಮದ ಲೆಕ್ಕಾಧಿಕಾರಿ ಸಾವನ್ನಪ್ಪಿದ್ದು, ಅವರ ಕುಟುಂಬಕ್ಕೆ ಸಂತ್ವಾನ ಹೇಳುತ್ತೇನೆ ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರಿನ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಆತ್ಮಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರ ವಿರುದ್ಧ ಎಫ್ಐಆರ್ ದಾಖಲಾಗಿದೆ. ವಾಲ್ಮೀಕಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಜೆ.ಜಿ. ಪದ್ಮನಾಭ್, ಲೆಕ್ಕಾಧಿಕಾರಿ ಪರಶುರಾಮ್ ದುರ್ಗಣ್ಣನವರ್, ಯುನಿಯನ್ ಬ್ಯಾಂಕ್ ಅಧಿಕಾರಿ ಸುಚಿಸ್ಮಿತಾ ವಿರುದ್ಧ ಪ್ರಕರಣ ದಾಖಲಾಗಿದೆ ಎಂದು ಮೂಲಗಳು ತಿಳಿಸಿವೆ. ಚಂದ್ರಶೇಖರ್‌ಗೆ ಹಣ ವರ್ಗಾವಣೆ ಕುರಿತಂತೆ ಮೇಲಾಧಿಕಾರಿಗಳ ಒತ್ತಡವಿತ್ತು ಎಂದು ಅವರ ಕುಟುಂಬ ಆರೋಪಿಸಿದೆ.

**<><*<><>*><>**

ರಾಜ್ಯದಲ್ಲಿ ಶಿಕ್ಷಕರಿಗೆ ಸಂಬಂಧಿಸಿದ ಹಲವು ಸಮಸ್ಯೆಗಳಿದ್ದು, ಅವುಗಳನ್ನು ಬಗೆಹರಿಸಲು ಸರ್ಕಾರ ಬದ್ಧವಾಗಿದೆ ಎಂದು ಶಿಕ್ಷಣ ಸಚಿವ ಮಧುಬಂಗಾರಪ್ಪ ಮೈಸೂರಿನಲ್ಲಿ ತಿಳಿಸಿದ್ದಾರೆ. ೫೩ ಸಾವಿರ ಶಿಕ್ಷಕರ ಕೊರತೆ ಇದ್ದು, ಈ ಪೈಕಿ ೧೨ ಸಾವಿರ ಶಿಕ್ಷಕರನ್ನು ಈಗ ನೇಮಕ ಮಾಡಲಾಗಿದೆ. ಅನುದಾನಿತ ಶಾಲೆಗಳ ೬ ಸಾವಿರ ಶಿಕ್ಷಕರ ನೇಮಕಾತಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ಇದೇ ವೇಳೆ ದಕ್ಷಿಣ ಶಿಕ್ಷಕರ ಕ್ಷೇತ್ರದ ಚುನಾವಣೆ ಹಿನ್ನೆಲೆಯಲ್ಲಿ ಮತಯಾಚಿಸಿದ ಅವರು, ಕಳೆದ ೨೦ ವರ್ಷಗಳಿಂದ ದಕ್ಷಿಣ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮರಿತಿಬ್ಬೆಗೌಡರು ಶಿಕ್ಷಕರ ಪರವಾಗಿ ಕೆಲಸ ಮಾಡುತ್ತಿದ್ದಾರೆ. ಸದನದಲ್ಲಿ ಮರಿತಿಬ್ಬೆಗೌಡರು ಗಟ್ಟಿ ಧ್ವನಿಯಲ್ಲಿ ಹೋರಾಟ ಮಾಡುತ್ತಾರೆ.  ಆದ್ದರಿಂದ ಇಂತವರನ್ನು ಶಿಕ್ಷಕರ ಕ್ಷೇತ್ರದಿಂದ ಆಯ್ಕೆ ಮಾಡಿ ಕಳುಹಿಸಬೇಕು ಎಂದು ಮನವಿ ಮಾಡಿದರು.

<><*<><>*><>

ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ನಾಯಕರು ಬೆಂಗಳೂರಿನ ಫ್ರೀಡಂ ಪಾರ್ಕ್ ನಲ್ಲಿಂದು ಪ್ರತಿಭಟನೆ ನಡೆಸಿದರು. ಮಾಜಿ ಮುಖ್ಯಮಂತ್ರಿ ಸದಾನಂದ ಗೌಡ ಮಾತನಾಡಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ರೈತರನ್ನು ನಿರ್ಲಕ್ಷ್ಯ ಮಾಡಲಾಗುತ್ತಿದ್ದು, ಅಭಿವೃದ್ಧಿ ಕುಂಠಿತವಾಗುತ್ತಿದೆ. ಅನುದಾನಗಳನ್ನು ಸಮರ್ಪಕವಾಗಿ ಬಿಡುಗಡೆ ಮಾಡುವಲ್ಲಿ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದರು. ಪ್ರತಿಪಕ್ಷ ನಾಯಕ ಆರ್. ಅಶೋಕ ಮಾತನಾಡಿ, ಬ್ರ್ಯಾಂಡ್ ಬೆಂಗಳೂರು ಮೂಲಕ ನಗರವನ್ನು ಸಿಂಗಾಪುರ, ನ್ಯೂಯಾರ್ಕ್ ಮಾಡುತ್ತೇನೆ ಎಂದು ಹೇಳಿರುವ ಡಿ.ಕೆ. ಶಿವಕುಮಾರ್, ಸರ್ಕಾರದಿಂದ ಒಂದು ರೂಪಾಯಿ ಕೂಡ ಬಿಡುಗಡೆ ಮಾಡಿಲ್ಲ ಎಂದು ಹೇಳಿದರು. ಕೂಡಲೇ ಬೆಂಗಳೂರಿಗೆ ೧ ಸಾವಿರ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿ ಮಳೆಹಾನಿ ತಡೆಯಲು ಕ್ರಮವಹಿಸಬೇಕು ಎಂದು ಆಗ್ರಹಿಸಿದ್ದಾರೆ. ಬೆಂಗಳೂರಿನ ರಸ್ತೆಗಳಲ್ಲಿ ಎಲ್ಲೆಡೆ ಗುಂಡಿ, ಕಸದ ರಾಶಿಯೇ ಕಾಣುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

<><*<><>*><>

ವಿಧಾನಸಭೆ ಮಾಜಿ ಸ್ಪೀಕರ್ ಮತ್ತು ಮಾಜಿ ಸಚಿವರಾದ ಕೆ.ಆರ್ ರಮೇಶ್ ಕುಮಾರ್ ಅವರನ್ನು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಬೆಂಗಳೂರಿನ ಸದಾಶಿವನಗರ ತಮ್ಮ ನಿವಾಸದಲ್ಲಿ ಭೇಟಿ ಮಾಡಿ ಪರಿಷತ್ ಚುನಾವಣೆ ಕುರಿತಂತೆ ಸಮಾಲೋಚನೆ ನಡೆಸಿದರು. ಬಳಿಕ ಮಾತನಾಡಿದ ಡಿ.ಕೆ ಶಿವಕುಮಾರ್ ಪರಿಷತ್ ಚುನಾವಣೆಗೆ ೨೦೦ಕ್ಕೂ ಹೆಚ್ಚು  ಆಕಾಂಕ್ಷಿಗಳಿದ್ದು, ಎಲ್ಲ ವರ್ಗಗಳು ಹಾಗೂ ವಿಭಾಗಗಳಿಗೂ ಪ್ರಾತಿನಿಧ್ಯ ಕಲ್ಪಿಸಲಾಗುವುದು. ಪರಿಷತ್ ಅಭ್ಯರ್ಥಿಗಳ ವಿಚಾರದಲ್ಲಿ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ವಿಧಾನಪರಿಷತ್ ಅಭ್ಯರ್ಥಿಗಳ ಆಯ್ಕೆ ವಿಚಾರವಾಗಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮ್ಮ ಸಲಹೆಗಳನ್ನು ಹಾಗೂ ಪಕ್ಷದ ಹಿರಿಯ ನಾಯಕರ ಸಲಹೆ, ಅಭಿಪ್ರಾಯಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪಡೆಯಬೇಕು ಎಂದು ತಿಳಿಸಿದ್ದಾರೆ. ಪಕ್ಷವನ್ನು ಕಟ್ಟಿ ಬೆಳೆಸಿದ ಅಭ್ಯರ್ಥಿಗಳನ್ನು ಮೇಲ್ಮನೆಗೆ ಆಯ್ಕೆ ಮಾಡಬೇಕು ಎಂದು ಹೇಳಿದ್ದಾರೆ. ಜೂನ್ ೩ ರಂದು ಶಿಕ್ಷಕರು ಮತ್ತು ಪದವೀಧರ ಕ್ಷೇತ್ರಗಳಿಂದ ೬ ಪರಿಷತ್ ಸ್ಥಾನಗಳಿಗೆ ಮತದಾನ ನಡೆಯಲಿದೆ. ಜೂನ್ ೧೩ ರಂದು ವಿಧಾನಸಭೆಯಿಂದ ವಿಧಾನಪರಿಷತ್‌ನ ೧೧ ಸ್ಥಾನಗಳಿಗೆ ಚುನಾವಣೆ ನಡೆಯಲಿದೆ.

**<><*<><>*><>**

ರಾಜ್ಯ ವಿಧಾನಸಭೆಯಿಂದ ವಿಧಾನಪರಿಷತ್ತಿಗೆ ಆಯ್ಕೆಗೊಂಡ ಹನ್ನೊಂದು ಸದಸ್ಯರು ಜೂನ್ ೧೭ ರಂದು ನಿವೃತ್ತರಾಗಲಿರುವುದರಿಂದ ಅವರ ಸ್ಥಾನಗಳನ್ನು ತುಂಬಲು ವಿಧಾನಪರಿಷತ್ತಿಗೆ ದ್ವೈವಾರ್ಷಿಕ ಚುನಾವಣೆಯನ್ನು ನಡೆಸಲು ಚುನಾವಣಾ ಆಯೋಗವು ನಿರ್ಧರಿಸಿದೆ. ಈ ದ್ವೈವಾರ್ಷಿಕ ಚುನಾವಣೆಗೆ ಕರ್ನಾಟಕ ವಿಧಾನಸಭೆಯ ಕಾರ್ಯದರ್ಶಿಗಳಾದ ಶ್ರೀಮತಿ ಎಂ.ಕೆ.ವಿಶಾಲಾಕ್ಷಿ ಅವರು ಚುನಾವಣಾಧಿಕಾರಿಯಾಗಿ ಹಾಗೂ ಕರ್ನಾಟಕ ವಿಧಾನಸಭೆಯ ನಿರ್ದೇಶಕ ಬಿ.ಎಸ್. ಮಹಾಲಿಂಗೇಶ್ ಸಹಾಯಕ ಚುನಾವಣಾಧಿಕಾರಿಯಾಗಿರುತ್ತಾರೆ. ಚುನಾವಣೆಗೆ ಸ್ಪರ್ಧಿಸಲಿಚ್ಛಿಸುವ ಅಭ್ಯರ್ಥಿಗಳು ಜೂನ್ ೩ ರವರೆಗೆ ಚುನಾವಣಾಧಿಕಾರಿ ಅಥವಾ ಸಹಾಯಕ ಚುನಾವಣಾಧಿಕಾರಿಯವರ ಕಛೇರಿಯಲ್ಲಿ ಬೆಳಿಗ್ಗೆ ೧೧ ಗಂಟೆಯಿಂದ ಮಧ್ಯಾಹ್ನ ೩ ಗಂಟೆಯವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಜೂನ್ ೨ ರಂದು ಸಾರ್ವತ್ರಿಕ ರಜಾ ದಿನವಾಗಿರುವುದರಿಂದ ಅಂದು ನಾಮಪತ್ರಗಳನ್ನು ಸ್ವೀಕರಿಸಲಾಗುವುದಿಲ್ಲ. ಪ್ರತಿಯೊಬ್ಬ ಅಭ್ಯರ್ಥಿಯು ತಮ್ಮ ನಾಮಪತ್ರದ ದಸ್ತಾವೇಜನ್ನು ನಿಗದಿತ ನಮೂನೆ ೨ಡಿ ಯಲ್ಲಿ ಸಲ್ಲಿಸಬೇಕು. ಮತ್ತು ಅವರ ಉಮೇದುವಾರಿಕೆಗೆ ಸೂಚಕರಾಗಿ ಕನಿಷ್ಠ ಹತ್ತು ಜನ ಹಾಲಿ ವಿಧಾನಸಭಾ ಸದಸ್ಯರು ಸಹಿ ಮಾಡಿರಬೇಕು. ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಾಮಪತ್ರದೊಂದಿಗೆ ೫ ಸಾವಿರ ರೂಪಾಯಿ ಹಾಗೂ ಇತರೆ ಅಭ್ಯರ್ಥಿಗಳು ೧೦ ಸಾವಿರ ರೂಪಾಯಿ ಠೇವಣಿ ಇಡಬೇಕಾಗುತ್ತದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**<><*<><>*><>**

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ರೈತರ ಸಮಸ್ಯೆಗಳನ್ನು ನಿರ್ಲಕ್ಷಿಸಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಕಳೆದ ವರ್ಷ ಮುಂಗಾರು ಮಳೆ ಕೈಕೊಟ್ಟಿದ್ದರಿಂದ ತೀವ್ರ ಬಿಕ್ಕಟ್ಟಿಗೆ ಸಿಲುಕಿರುವ ರೈತರು ಕೃಷಿ ಚಟುವಟಿಕೆ ಕೈಗೊಳ್ಳಲು ಸಾಧ್ಯವಾಗಿಲ್ಲ. ಈ ಹೊತ್ತಿನಲ್ಲಿ ಬರ ಪರಿಹಾರವು ರೈತರ ಖಾತೆಗೆ ಜಮೆಯಾಗಿಲ್ಲ ಎಂದು ದೂರಿದ್ದಾರೆ. ಸಾಲದ ವಿರುದ್ಧ ಪರಿಹಾರ ಮೊತ್ತವನ್ನು ಹೊಂದಾಣಿಕೆ ಮಾಡದಂತೆ ಮುಖ್ಯಮಂತ್ರಿ

ಸಿದ್ದರಾಮಯ್ಯ ಅವರು, ಬ್ಯಾಂಕ್‌ಗಳಿಗೆ ನೀಡಿದ ನಿರ್ದೇಶನವನ್ನು ಪಾಲನೆ ಮಾಡಿಲ್ಲ. ಇದು ಸರ್ಕಾರದ ವೈಫಲ್ಯವನ್ನು ಎತ್ತಿ ತೋರಿಸುತ್ತದೆ ಎಂದು ಟೀಕಿಸಿದ್ದಾರೆ.

**<><*<><>*><>**

೨೦೨೪-೨೫ನೇ ಸಾಲಿನ ಶಾಲಾ ತರಗತಿಗಳು ನಾಳೆ ಆರಂಭವಾಗಲಿವೆ. ಸರ್ಕಾರಿ ಮತ್ತು ಖಾಸಗಿ ಶಾಲೆಗಳು ಕಾರ್ಯಾರಂಭ ಮಾಡಲಿದ್ದು, ಶೈಕ್ಷಣಿಕ ವರ್ಷದ ಸ್ವಾಗತಕ್ಕೆ ಸಿದ್ಧತೆ ಮಾಡಿಕೊಂಡಿವೆ. ಮಕ್ಕಳಿಗೆ ಎಲ್ಲ ರೀತಿಯ ಮೂಲಸೌಕರ್ಯಗಳನ್ನು ಒದಗಿಸುವಂತೆ ಹಾಗೂ ಗುಣಮಟ್ಟದ ಶಿಕ್ಷಣಕ್ಕೆ ಆದ್ಯತೆ ನೀಡುವಂತೆ ಶಿಕ್ಷಣ ಇಲಾಖೆ ಸೂಚನೆ ನೀಡಿದೆ. ನಾಳೆ ಶಾಲೆಗಳು ಕಾರ್ಯಾರಂಭ ಮಾಡಲಿದ್ದರೂ, ಗುರುವಾರದವರೆಗೆ ಶಾಲಾ ಕೊಠಡಿಗಳು, ಆಟದ ಮೈದಾನ, ಬಿಸಿಯೂಟ ಕೊಠಡಿ ಸೇರಿದಂತೆ ಇನ್ನಿತರ ಮೂಲಸೌಕರ್ಯಗಳ ಸ್ವಚ್ಛತೆ ಕಾರ್ಯ ನಡೆಯಲಿದೆ. ಸರ್ಕಾರಿ ಶಾಲೆಗಳಲ್ಲಿ ಮೇ ೩೧ರಂದು ಮಕ್ಕಳು ಶಾಲೆಗೆ ಆಗಮಿಸಲಿದ್ದಾರೆ. ಅಂದೇ ಸರ್ಕಾರಿ ಶಾಲಾ ಮಕ್ಕಳಿಗೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳನ್ನು ವಿತರಣೆ ಮಾಡಲು ಶಿಕ್ಷಣ ಇಲಾಖೆ ಸಿದ್ಧತೆ ಮಾಡಿಕೊಂಡಿದೆ.

**<><*<><>*><>**

ಚಿತ್ರದುರ್ಗ ಜಿಲ್ಲೆಯ ಕೆಲ ಗ್ರಾಮಗಳಲ್ಲಿ ಬೆಳೆ ವಿಮೆ ನೀಡುವಲ್ಲಿ ತಾರತಮ್ಯವಾಗಿದೆ ಎಂದು ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಾಂಖ್ಯಿಕ ಮತ್ತು ಯೋಜನಾ ಖಾತೆ ಸಚಿವ ಡಿ.ಸುಧಾಕರ್ ಹೇಳಿದ್ದಾರೆ. ಚಿತ್ರದುರ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೃಷಿ ಇಲಾಖೆ ಮತ್ತು ವಿಮಾ ಕಂಪನಿಗಳ ಜೊತೆ ಚರ್ಚಿಸಿ ಸಮಸ್ಯೆಯನ್ನು ಬಗೆಹರಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ನಿರೀಕ್ಷೆಯಂತೆ ಮುಂಗಾರು ರಾಜ್ಯವನ್ನು ಜೂನ್ ೫ರಂದು ಪ್ರವೇಶಿಸಲಿದೆ. ಈಗಾಗಲೇ ಮಲೆನಾಡು, ಕರಾವಳಿ ಮತ್ತು ಉತ್ತರ ಒಳನಾಡಿನ ಬಹುತೇಕ ಜಿಲ್ಲೆಗಳಲ್ಲಿ ಮಳೆಯಾಗಿದ್ದು, ಅಲ್ಲಲ್ಲಿ ಬಿತ್ತನೆ ಆರಂಭವಾಗಿವೆ. ಇದೇ ೩೧ರಂದು ಮುಂಗಾರು ಕೇರಳವನ್ನು ಪ್ರವೇಶಿಸಲಿದ್ದು, ಕರಾವಳಿಯ ಜಿಲ್ಲೆಗಳಲ್ಲಿ ಸಾಧಾರಣದಿಂದ ಭಾರಿ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಈ ಮಧ್ಯೆ, ಮುಂಗಾರು ಜೂನ್ ೫ರಂದು ಕರ್ನಾಟಕವನ್ನು ಪ್ರವೇಶ ಮಾಡಲಿದ್ದು, ಕರಾವಳಿ, ಮಲೆನಾಡು ಪ್ರದೇಶಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ.

**<><*<><>*><>**

ದಾವಣಗೆರೆ ಜಿಲ್ಲೆಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಬಿತ್ತನೆ ಬೀಜ. ರಸಗೊಬ್ಬರಕ್ಕೆ ಯಾವುದೇ ಕೊರತೆಯಾಗದಂತೆ ಕೃಷಿ ಇಲಾಖೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕೆಂದು ಶಾಸಕ ಕೆ.ಎಸ್.ಬಸವಂತಪ್ಪ ಸೂಚಿಸಿದ್ದಾರೆ. ಮಾಯಕೊಂಡ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಆನಗೋಡು ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿತ್ತನೆ ಕಾರ್ಯ ಸಂಪೂರ್ಣ ಮುಗಿಯುವವರೆಗೂ ಅಧಿಕಾರಿಗಳು ರೈತ ಸಂಪರ್ಕ ಕೇಂದ್ರದಲ್ಲಿಯೇ ಇದ್ದು, ರೈತರಿಗೆ ಸಲಹೆ ನೀಡಬೇಕೆಂದು ತಿಳಿಸಿದರು. ಕಾಳ ಸಂತೆಯಲ್ಲಿ ಅನಧಿಕೃತ ಮತ್ತು ಕಳಪೆ ಬಿತ್ತನೆ ಬೀಜ, ರಸಗೊಬ್ಬರ ಮಾರಾಟ ತಡೆಗೆ ವಿಚಕ್ಷಣ ದಳ ನಿರಂತರವಾಗಿ ಕಾರ್ಯಾಚರಣೆ ಮಾಡಬೇಕು ಮತ್ತು ಅಂಥವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕೆಂದು ನಿರ್ದೇಶನ ನೀಡಿದ್ದಾರೆ.

**<><*<><>*><>**

ಯಾದಗಿರಿ ಜಿಲ್ಲೆಯ ಎಲ್ಲ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬಿತ್ತನೆ ಬೀಜಗಳು ಲಭ್ಯವಿದ್ದು ರೈತರು ತಮ್ಮ ಆಧಾರ್, ಪಹಣಿ ನೀಡಿ ಬಿತ್ತನೆ ಬೀಜ ಪಡೆಯಬಹುದಾಗಿದೆ ಎಂದು ಯಾದಗಿರಿ ಜಂಟಿ ಕೃಷಿ ನಿರ್ದೇಶಕ ಕೆ. ಹೆಚ್ ರವಿ ತಿಳಿಸಿದ್ದಾರೆ. ಜಾತಿ ಪ್ರಮಾಣ ಪತ್ರವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ನೀಡಿದಲ್ಲಿ ಅವರಿಗೆ ರಿಯಾಯಿತಿ ದರದಲ್ಲಿಯೂ ವಿನಾಯಿತಿ ಇರಲಿದೆ ಎಂದು ಹೇಳಿದ್ದಾರೆ. ಶಹಾಪುರ, ದೋರನಹಳ್ಳಿ, ಗೋಗಿ, ವಡಗೇರಾ, ಹೈಯ್ಯಾಳ, ಸುರಪುರ, ಕಕ್ಕೇರಾ, ಕೊಡೆಕಲ್, ಹುಣಸಗಿ, ಕೆಂಭಾವಿ. ಯಾದಗಿರಿ ತಾಲೂಕು ವ್ಯಾಪ್ತಿಯ ಯಾದಗಿರಿ, ಹತ್ತಿಕುಣಿ, ಕೊಂಕಲ್, ಬಳಿಚಕ್ರ, ಸೈದಾಪೂರ, ಗುರುಮಿಠಕಲ್ ರೈತ ಸಂಪರ್ಕ ಕೇಂದ್ರಗಳಲ್ಲಿ ವಿವಿಧ ಬೀಜಗಳ ದಾಸ್ತಾನು ಇರುತ್ತದೆ ಎಂದು ಅವರು ತಿಳಿಸಿದ್ದಾರೆ. ಜಿಲ್ಲೆಯ ರಸಗೊಬ್ಬರ ಮಾರಾಟಗಾರರ ಬಳಿ ವಿವಿಧ ರಸಗೊಬ್ಬರಗಳು ಲಭ್ಯವಿದ್ದು ರೈತರು ತಮ್ಮ ಆಧಾರ ಪ್ರತಿಯನ್ನು ನೀಡಿ ರಸಗೊಬ್ಬರ ಪಡೆಯಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಇಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ವಿಶ್ವ ಮಲೇರಿಯಾ ದಿನಾಚರಣೆ ಅಂಗವಾಗಿ ಜಾಗೃತಿ ಜಾಥಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಜಾಥಾಗೆ ಚಾಲನೆ ನೀಡಿದ ಜಿಲ್ಲಾ ಆರೋಗ್ಯ ಅಧಿಕಾರಿ ಡಾ.ಸುನಿಲ್ ಕುಮಾರ್ ಮಾತನಾಡಿ, ೨೦೨೫ರ ವೇಳೆಗೆ ಮಲೇರಿಯಾ ಮುಕ್ತ ಕರ್ನಾಟಕ ಮಾಡುವ ಗುರಿ ಹೊಂದಲಾಗಿದ್ದು, ಇದಕ್ಕೆ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ. ಮನೆ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊಳ್ಳಬೇಕಿದೆ. ಸೊಳ್ಳೆಗಳು ಉತ್ಪತ್ತಿ ಆಗದಂತೆ ಮನೆಗಳ ಸುತ್ತಲಿನ ಪರಿಸರದ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕಿದೆ ಎಂದರು.

<><*<><>*><>

ಬಾಗಲಕೋಟೆಯಲ್ಲಿ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯ ಜೂನ್ ೪ ರಂದು ನಡೆಯಲಿದ್ದು, ಅಧಿಕಾರಿಗಳು ಹಾಗೂ ಸಿಬ್ಬಂದಿ ತಮ್ಮ ಕಾರ್ಯವನ್ನು ಜವಾಬ್ದಾರಿಯಿಂದ ನಿರ್ವಹಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಜಾನಕಿ ಕೆ.ಎಂ ಸೂಚಿಸಿದ್ದಾರೆ. ಜಿಲ್ಲಾಡಳಿತ ಭವನದಲ್ಲಿ ನಡೆದ ಲೋಕಸಭಾ ಚುನಾವಣೆ ಮತ ಎಣಿಕೆ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತೋಟಗಾರಿಕಾ ವಿಶ್ವವಿದ್ಯಾಲಯದಲ್ಲಿ ಬಾಗಲಕೋಟೆ ಲೋಕಸಭಾ ಚುನಾವಣೆಗೆ ಸಂಬಂಧಿಸಿದ ೮ ಮತಕ್ಷೇತ್ರಗಳ ಮತ ಎಣಿಕೆ ಕಾರ್ಯ ನಡೆಸಲಾಗುತ್ತಿದೆ. ಈಗಾಗಲೇ ಮತ ಎಣಿಕೆ ಕೇಂದ್ರ ಸಂಪೂರ್ಣ ಸಜ್ಜಾಗಿದ್ದು, ಯಾವುದೇ ರೀತಿಯ ಗೊಂದಲ, ಊಹಾಪೋಹಗಳಿಗೆ ಅವಕಾಶವಿಲ್ಲದಂತೆ ಚುನಾವಣಾ ಆಯೋಗದ ನಿರ್ದೇಶನಗಳನ್ವಯ ಮತ ಎಣಿಕೆ ಕಾರ್ಯವನ್ನು ಯಶಸ್ವಿಯಾಗಿ ನಡೆಸುವಂತೆ ಸೂಚಿಸಿದರು.

<><*<><>*><>

ತುಮಕೂರು ಜಿಲ್ಲೆಯಲ್ಲಿ ಜೂನ್ ೭ ರಿಂದ ಮೂರು ತಿಂಗಳುಗಳ ಕಾಲ ಆರೋಗ್ಯ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲೂ ಏಕ ಕಾಲದಲ್ಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಪ್ರಭು .ಜಿ ತಿಳಿಸಿದ್ದಾರೆ. ತಾಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ತಾಲ್ಲೂಕು ಆರೋಗ್ಯ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೩೦ ವರ್ಷ ಮೇಲ್ಪಟ್ಟ ಸುಮಾರು ೧೭ ಲಕ್ಷ ಜನರಿದ್ದು, ಎಲ್ಲರಿಗೂ ರಕ್ತದೊತ್ತಡ, ಮಧುಮೇಹ, ಟಿಬಿ, ರಕ್ತ ಹೀನತೆ ಸೇರಿದಂತೆ ಹಲವು ಖಾಯಿಲೆಗಳಿಗೆ ತಂಡಗಳನ್ನು ರಚಿಸಿಕೊಂಡು ಚಿಕಿತ್ಸೆ ನೀಡಲಾಗುವುದು ಎಂದರು. ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿ ೫ ಲಕ್ಷ ರೂಪಾಯಿಗಳವರೆಗೆ ಚಿಕಿತ್ಸಾ ಸೌಲಭ್ಯ ನೀಡಲಾಗಿದೆ. ಜನರ ಮಾಹಿತಿಗಾಗಿ ಎಲ್ಲ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಬಗ್ಗೆ ಫಲಕಗಳನ್ನು ಅಳವಡಿಸಬೇಕು ಎಂದು ಸೂಚಿಸಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯಲ್ಲಿ ನೋಂದಾವಣೆಯಾದ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಎಲ್ಲಾ ವಕ್ಫ್ ಸಂಸ್ಥೆಗಳು ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಮಾದರಿ ನಿಯಮಾವಳಿಯ ನಮೂನೆ ನಂ.-೪೨ ನ್ನು ಅಂಗೀಕರಿಸಿಕೊಳ್ಳುವುದು ಕಡ್ಡಾಯವಾಗಿದೆ. ಈ ವರೆಗೂ ಮಾದರಿ ನಿಯಮಾವಳಿಯನ್ನು ಮಂಡಳಿಯಿಂದ ಅಂಗೀಕರಿಸಿಕೊಳ್ಳದ ವಕ್ಫ್ ಸಂಸ್ಥೆಗಳು ಕೂಡಲೆ ಮಾದರಿ ನಿಯಮಾವಳಿಯ

ಬೈಲಾವನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಜಿಲ್ಲಾ ವಕ್ಫ್ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಕೂಡಲೇ ಸಲ್ಲಿಸಬೇಕು ಎಂದು ಜಿಲ್ಲಾ ವಕ್ಫ್ ಕಚೇರಿ ಪ್ರಕಟಣೆ ತಿಳಿಸಿದೆ.

೨. ಪ್ರಸಕ್ತ ಸಾಲಿನಲ್ಲಿ ಕೋಲಾರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಡಾ. ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಹಾಗೂ ಮೌಲಾನಾ ಆಜಾದ್ ಮಾದರಿ ಶಾಲೆಗಳಲ್ಲಿ ಖಾಲಿ ಇರುವ ಕನ್ನಡ, ಇಂಗ್ಲೀಷ್, ಹಿಂದಿ, ಉರ್ದು, ಸಾಮಾನ್ಯ ವಿಜ್ಞಾನ, ಗಣಿತ, ಸಮಾಜ ವಿಜ್ಞಾನ, ದೈಹಿಕ, ಗಣಕಯಂತ್ರ, ಆರ್ಟ್ ಅಂಡ್ ಕ್ರಾಫ್ಟ್ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಿಸಿಕೊಳ್ಳಲು ಅರ್ಜಿ ಆಹ್ವಾನಿಸಲಾಗಿದೆ.

೩. ಇಂದು ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ "ವಿಶ್ವ ಮುಟ್ಟಿನ ನೈರ್ಮಲ್ಯ ದಿನಾಚರಣೆಯನ್ನು ವಿಜಯನಗರ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿತ್ತು.

೪. ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ ಹೆಸರಘಟ್ಟದಲ್ಲಿ ತ್ರಿಫಲ ಮಾವು, ಹಲಸು, ಬಾಳೆ ವೈವಿಧ್ಯತಾ ಮೇಳವನ್ನು ಇದೇ ೩೧ ರಿಂದ ಜೂನ್ ೨ ರವರೆಗೆ ಹಮ್ಮಿಕೊಳ್ಳಲಿದೆ. ಹಲವಾರು ಪ್ರದೇಶದ ಮಾವಿನ ಪ್ರಭೇದಗಳು ಹಾಗೂ ಮಾಗಿದ ಮತ್ತು ರಸಭರಿತ ಹಲಸಿನ ಹಣ್ಣುಗಳನ್ನು ಇಲ್ಲಿ ಆಸ್ವಾಧಿಸಬಹುದಾಗಿದೆ. ಬಾಳೆ ಹಣ್ಣಿನ ದೇಶಿ ಹಾಗೂ ವಿದೇಶಿ ಪ್ರಭೇದಗಳನ್ನು ತ್ರಿಫಲ ಮೇಳದಲ್ಲಿ ಪರಿಚಯಿಸಲಾಗುತ್ತಿದೆ.

**<><*<><>*><>**

ಇನ್ನು ಹವಾವರ್ತಮಾನ,

ರಾಜ್ಯಾದ್ಯಂತ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಗರಿಷ್ಠ ತಾಪಮಾನ ೩೮.೦ ಡಿಗ್ರಿ ಸೆಲ್ಸಿಯೆಸ್ ಬೀದರ್‌ನಲ್ಲಿ ದಾಖಲಾಗಿದೆ. ರಾಜ್ಯದಲ್ಲಿ ಮುಂದಿನ ೫ ದಿನಗಳವರೆಗೆ ಗರಿಷ್ಠ ತಾಪಮಾನದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣ. ಗುಡುಗು ಸಹಿತ ಮಳೆಯಾಗುವ ನಿರೀಕ್ಷೆಯಿದೆ. ಮುಂದಿನ ೨೪ ಗಂಟೆಗಳಲ್ಲಿ ಉಡುಪಿ ಜಿಲ್ಲೆಯಲ್ಲಿ ಸಾಧಾರಣದಿಂದ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಉತ್ತರಕನ್ನಡ, ಧಾರವಾಡ, ಚಾಮರಾಜನಗರ, ಮೈಸೂರು, ರಾಮನಗರ ಜಿಲ್ಲೆಗಳಲ್ಲಿ ಹಗುರ ಮಳೆಯಾಗುವ ಸಾಧ್ಯತೆಯಿದೆ. ಬೀದರ್, ಗದಗ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ವಿಜಯನಗರ ಜಿಲ್ಲೆಗಳಲ್ಲಿ ಒಣಹವೆ ಇರಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ <>*><>